Mysore University Dr. B.R. Ambedkar Research and Extension Centre organized Special lecture on **"The Reservation of Backward Classes and Politics"**, on August 7, 2021. Prof. G. Hemanthakumar, Vice Chancellor of Mysore University, inaugurated the programme. K.N. Lingappa,( **K.A.S,Rtd**) Visiting Professor D. Devaraja Urs Chair, University of Mysore, delivered the special lecture. He narrated the struggles that have been going on regarding the Reservation of Backward Classes in the context of India and Karnataka. He highlighted the contemporary status of Reservation and its politics and analysed the journey of Reservation to the Backward Classes from Miller Committee to the present. Also quoted the various judgements of the apex court and the government orders of the union and the state governments along with the statistics. Basavaraja Devanura, Visiting Professor at Dr.B.R. Ambedkar Chair, presided. He said that if the Reservation of Backward Classes and politics are created in a proper way then all the backward classes will be able to come under the wing of reservation and get the rights and powers in accordance with the constitution.

DIRECTOR
Dr. B. R. Ambedkar
Research & Extension Centre
University of Mysore
Manasagangotri, Mysore-570 006

134




ಮೈಸೂರು ವಿಶ್ವವಿದ್ಯಾನಿಲಯ

## ಡಾ. ಬಿ. ಆರ್. ಅಂಬೇಡ್ಕರ್ ಸಂಶೋಧನ ಹಾಗೂ ವಿಸ್ತರಣ ಕೇಂದ್ರ

ಮಾನಸಗಂಗೋತ್ರಿ, ಮೈಸೂರು

## ವಿಶೇಷ ಉಪನ್ಯಾಸ ಕಾರ್ಯಕ್ರಮ

**ದಿನಾಂಕ: 08-07-2021 ಗುರುವಾರ, ಬೆಳಗ್ಗೆ 10:30ಕ್ಕೆ**



ಉದ್ಘಾಟನೆ :

**ಪ್ರೊ.ಜಿ.ಹೇಮಂತಕುಮಾರ್**

ಗೌರವಾನ್ವಿತ ಕುಲಪತಿಗಳು

ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು




ವಿಶೇಷ ಉಪನ್ಯಾಸ :

**"ಹಿಂದುಳಿದ ವರ್ಗಗಳ ಮೀಸಲಾತಿ ಮತ್ತು ರಾಜಕಾರಣ"**

**ಶ್ರೀ ಕೆ. ಎನ್. ಲಿಂಗಪ್ಪ, ಕ.ಆ.ಸೇ (ನಿವೃತ್ತ)**

ಸಂದರ್ಶಕ ಪ್ರಾಧ್ಯಾಪಕರು, ಶ್ರೀ ಡಿ. ದೇವರಾಜ ಅರಸು ಪೀಠ

ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು



ಅಧ್ಯಕ್ಷತೆ :

**ಬಸವರಾಜ ದೇವನೂರ**

ಸಂದರ್ಶಕ ಪ್ರಾಧ್ಯಾಪಕರು

ಡಾ. ಬಿ. ಆರ್. ಅಂಬೇಡ್ಕರ್ ಪೀಠ

ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು

**ಎಲ್ಲರಿಗೂ ಪ್ರೀತಿಯ ಸ್ವಾಗತ**

**ಪ್ರೊ.ಜೆ.ಸೋಮಶೇಖರ್**

ನಿರ್ದೇಶಕರು

ಬೋಧಕರು, ಬೋಧಕೇತರರು, ಸಂಶೋಧಕರು ಹಾಗೂ ವಿದ್ಯಾರ್ಥಿಗಳು

ಡಾ. ಬಿ. ಆರ್. ಅಂಬೇಡ್ಕರ್ ಸಂಶೋಧನ ಹಾಗೂ ವಿಸ್ತರಣ ಕೇಂದ್ರ

Join Zoom Meeting

https://us02web.zoom.us/j/81821755028?pwd=cFhrUTdWUHNDMGVsTjE0d2NvR1h6Zz09

Meeting ID: 818 2175 5028

Passcode: 833296

ಪ್ರಜಾವಾಣಿ ಶುಕ್ರವಾರ • ಜುಲೈ 9, 2021

# ಸರ್ಕಾರಿ ಹುದ್ದೆ: 121 ಜಾತಿಗಳು ವಂಚಿತ

## ಪ್ರೊ.ಕೆ.ಎಸ್.ಲಿಂಗಪ್ಪ ಮಾಹಿತಿ • ಹಿಂದುಳಿದ ವರ್ಗಗಳ ಮೀಸಲಾತಿ ಮತ್ತು ರಾಜಕಾರಣ ಕುರಿತು ಉಪನ್ಯಾಸ

ಪ್ರಜಾವಾಣಿ ವಾರ್ತೆ

ಮೈಸೂರು: '121 ಜಾತಿಗಳ ಜನ ಒಂದೇ ಒಂದು ಸರ್ಕಾರಿ ಹುದ್ದೆಯನ್ನು ಪಡೆಯಲು ಸಾಧ್ಯವಾಗಿಲ್ಲ. ಇದು ಯಾವ ರೀತಿಯ ಸಾಮಾಜಿಕ ನ್ಯಾಯ' ಎಂದು ಮೈಸೂರು ವಿಶ್ವವಿದ್ಯಾನಿಲಯದ ಡಿ.ದೇವರಾಜ ಅರಸು ಪೀಠದ ಸಂದರ್ಶಕ ಪ್ರಾಧ್ಯಾಪಕ ಕೆ.ಎಸ್.ಲಿಂಗಪ್ಪ ಪ್ರಶ್ನಿಸಿದರು.

ಮೈಸೂರು ವಿಶ್ವವಿದ್ಯಾನಿಲಯದ ಡಾ.ಬಿ.ಆರ್.ಅಂಬೇಡ್ಕರ್ ಸಂಶೋಧನ ಮತ್ತು ವಿಸ್ತರಣಾ ಕೇಂದ್ರವು ಗುರುವಾರ ಏರ್ಪಡಿಸಿದ್ದ ವೆಬಿನಾರ್‌ನಲ್ಲಿ 'ಹಿಂದುಳಿದ ವರ್ಗಗಳ ಮೀಸಲಾತಿ ಮತ್ತು ರಾಜಕಾರಣ' ಕುರಿತು ವಿಶೇಷ ಉಪನ್ಯಾಸ ನೀಡಿದರು.

'ಈಗ ಶೇ 95ರಷ್ಟು ಸಮುದಾಯಗಳನ್ನು ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ವರ್ಗಗಳೆಂದು ಗುರುತಿಸಲಾಗಿದೆ. ಕೆಲವೇ ಕೆಲವು ಬೆರಳೆಣಿಕೆಯಷ್ಟು ಸಮುದಾಯಗಳು ಮಾತ್ರವೇ ಮೀಸಲಾತಿಯಿಂದ ದೂರ ಉಳಿದಿವೆ. ಅರ್ಹತೆ ಇಲ್ಲದ ಸಮುದಾಯಗಳು ಮೀಸಲಾತಿಯ ಬಹುಪಾಲನ್ನು ಕಬಳಿಸುತ್ತಿವೆ' ಎಂದು ಹೇಳಿದರು.

'ಚಿನ್ನಪ್ಪರೆಡ್ಡಿ ವರದಿಯನ್ನು

### ಮುಖ್ಯಾಂಶಗಳು

- ಅಂಬೇಡ್ಕರ್ ಸಂಶೋಧನ ಮತ್ತು ವಿಸ್ತರಣಾ ಕೇಂದ್ರದಿಂದ ಕಾರ್ಯಕ್ರಮ
- ಮೈಸೂರು ವಿ.ವಿ ಕುಲಪತಿ ಪ್ರೊ.ಜಿ.ಹೇಮಂತಕುಮಾರ್ ಉದ್ಘಾಟನೆ
- ವೆಬಿನಾರ್‌ನಲ್ಲಿ 50ಕ್ಕೂ ಅಧಿಕ ಮಂದಿ ಭಾಗಿ

ಯಥಾವತ್ತಾಗಿ ಜಾರಿ ಮಾಡದ ಸರ್ಕಾರ, ವರದಿಯಲ್ಲಿ ಶಿಫಾರಸು ಮಾಡದ ಜಾತಿಗಳನ್ನು ಹಿಂದುಳಿದ ವರ್ಗಗಳ ಪಟ್ಟಿಯಲ್ಲಿ ಸೇರಿಸಿ, 3ಎ, 3ಬಿ ವರ್ಗಗಳನ್ನು ಸೃಷ್ಟಿಸಿತು. ಇದರಿಂದ ಒಟ್ಟಾರೆ ಮೀಸಲಾತಿಯ ಪ್ರಮಾಣ ಶೇ 73ಕ್ಕೆ ಹೆಚ್ಚಿತು. ಪ್ರಕರಣ ಸುಪ್ರೀಂ ಕೋರ್ಟ್ ಮೆಟ್ಟಿಲೇರಿದಾಗ ಸರ್ಕಾರ ತನ್ನ ನಿಲುವನ್ನು ಸಮರ್ಥಿಸಿಕೊಳ್ಳಲಿಲ್ಲ' ಎಂದು ಬೇಸರ ವ್ಯಕ್ತಪಡಿಸಿದರು.

'ನ್ಯಾಯಾಲಯವು ಅಂತಿಮವಾಗಿ ಶೇ 50ಕ್ಕೆ ಮೀಸಲಾತಿ ಪ್ರಮಾಣ ಮಿತಿಗೊಳಿಸಿ ಎಂದು ತೀರ್ಪು ನೀಡಿದಾಗಲೂ ವರದಿಯಲ್ಲಿ ಶಿಫಾರಸು ಮಾಡದ ಜಾತಿಗಳನ್ನು ಪಟ್ಟಿಯಿಂದ ಕೈಬಿಡದ ಸರ್ಕಾರ





ಮೈಸೂರಿನ ವಿಜ್ಞಾನ ಭವನದಲ್ಲಿ ಗುರುವಾರ ಡಾ.ಬಿ.ಆರ್.ಅಂಬೇಡ್ಕರ್ ಸಂಶೋಧನ ಹಾಗೂ ವಿಸ್ತರಣ ಕೇಂದ್ರದ ವತಿಯಿಂದ ಆಯೋಜಿಸಿದ್ದ ವಿಶೇಷ ಉಪನ್ಯಾಸ ಕಾರ್ಯಕ್ರಮವನ್ನು ಮೈಸೂರು ವಿಶ್ವವಿದ್ಯಾನಿಲಯದ ಕುಲಪತಿ ಪ್ರೊ.ಜಿ.ಹೇಮಂತ ಕುಮಾರ್ ಗಿಡಕ್ಕೆ ನೀರು ಹಾಕುವ ಮೂಲಕ ಉದ್ಘಾಟಿಸಿದರು

ಎಲ್ಲವನ್ನೂ ಸೇರಿಸಿ ಮೀಸಲಾತಿ ಪ್ರಮಾಣವನ್ನು ಕಡಿಮೆಗೊಳಿಸಿತು. ಅದರಿಂದ, ವರದಿಯಲ್ಲಿ ಶಿಫಾರಸು ಮಾಡಿದ ಜಾತಿಗಳಿಗೆ ಘೋರ ಅನ್ಯಾಯ ಮಾಡಿದಂತಾಯಿತು. ಅರ್ಹತೆ ಇಲ್ಲದ ಜಾತಿಗಳನ್ನು ಹಿಂದುಳಿದ ವರ್ಗಗಳ ಪಟ್ಟಿಯಲ್ಲಿ ಸೇರಿಸಿದ ಕುರಿತು ಯಾರೂ ಪ್ರಶ್ನಿಸದೇ ಇರುವುದು ದೊಡ್ಡ ದುರಂತ' ಎಂದು ವಿಷಾದಿಸಿದರು.

'ಹಿಂದುಳಿದ ವರ್ಗಗಳ ಆಯೋಗಗಳು ಹಿಂದುಳಿದ ಜಾತಿಗಳನ್ನು ಸರಿಯಾಗಿ ಗುರುತಿಸಿ ವರದಿ ನೀಡಿದರೂ ಸರ್ಕಾರ ಆ ವರದಿಯನ್ನು ಯಥಾವತ್ತಾಗಿ ಜಾರಿಗೊಳಿಸುತ್ತಿಲ್ಲ. ಈ ವರದಿಯನ್ನು ವಿರೂಪಗೊಳಿಸಿ ಜಾರಿಗೊಳಿಸುತ್ತಿರುವುದರಿಂದ ನಿಜವಾಗಿ ಹಿಂದುಳಿದಿರುವ ಜಾತಿಗಳಿಗೆ ಅನ್ಯಾಯವಾಗುತ್ತಿದೆ' ಎಂದು ಕಿಡಿಕಾರಿದರು.

'ಎಲ್ಲ ಪ್ರವರ್ಗಗಳಲ್ಲೂ ಇದುವರೆಗೆ ಅವಕಾಶಗಳನ್ನು ಪಡೆಯದ ಜಾತಿಗಳನ್ನು ಗುರುತಿಸಿ ಅವುಗಳನ್ನೆಲ್ಲ ಸೇರಿಸಿ ಪ್ರತ್ಯೇಕ ಪ್ರವರ್ಗ ಮಾಡಬೇಕು. ಜನಸಂಖ್ಯೆಗೆ ಅನುಗುಣವಾಗಿ ಹಾಗೂ ಖಾಸಗಿ ಕ್ಷೇತ್ರದಲ್ಲಿ ಮೀಸಲಾತಿ ನೀಡಬೇಕು' ಎಂದು ಸಲಹೆ ನೀಡಿದರು.

ಮೈಸೂರು ವಿಶ್ವವಿದ್ಯಾನಿಲಯದ ಕುಲಪತಿ ಪ್ರೊ.ಜಿ.ಹೇಮಂತಕುಮಾರ್ ಕಾರ್ಯಕ್ರಮ ಉದ್ಘಾಟಿಸಿದರು. ಡಾ.ಬಿ.ಆರ್.ಅಂಬೇಡ್ಕರ್ ಸಂಶೋಧನಾ ಮತ್ತು ವಿಸ್ತರಣಾ ಕೇಂದ್ರದ ಸಂದರ್ಶಕ ಪ್ರಾಧ್ಯಾಪಕ ಬಸವರಾಜ ದೇವನೂರ, ನಿರ್ದೇಶಕ ಪ್ರೊ.ಜೆ.ಸೋಮಶೇಖರ್ ಇದ್ದರು.


ಮೈಸೂರು ವಿಶ್ವವಿದ್ಯಾನಿಲಯ

[illegible] "ಹಿಂದುಳಿದ ವರ್ಗಗಳ ಮೀಸಲಾತಿ ಮತ್ತು ರಾಜಕಾರಣ" ಕಾರ್ಯಕ್ರಮದಲ್ಲಿ ಹಾಜರಿದ್ದವರು.

| ಕ್ರ.ಸಂ | ಹೆಸರು | ಸಹಿ |
|---|---|---|
| 01 | ಪ್ರೊ. ಜಿ. ಹೇಮಂತ ಕುಮಾರ್ | [signature] |
| 02 | ಕೆ. ಎನ್. ಲಿಂಗಪ್ಪ | [signature] |
| 03 | ಬಸವರಾಜ ದೇವನೂರ | [signature] |
| 04 | ಪ್ರೊ. ಜೆ. ಸೋಮಶೇಖರ್ | [signature] |
| 05 | ಡಾ. ಎಸ್. ನರೇಂದ್ರಕುಮಾರ್ | [signature] |
| 06 | ಡಾ. ಎಂ. ರಾಜೇಶ್ವರಿ | [signature] |
| 07 | Mahadevaswamy. D | [signature] |
| 8 | | |